ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	233
ಸದಸ್ಯರ ಹೆಸರು	ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	04-03-2020
ಉತ್ತರಿಸುವ ಸಚಿವರು	ಕಂದಾಯ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಹೊಸ ತಾಲ್ಲೂಕುಗಳ ರಚನೆಯಾಗಿ ಅಧಿಕೃತವಾಗಿ ಉದ್ಘಾಟನೆಗೊಂಡಿದ್ದರು ತಾಲ್ಲೂಕು ಕಚೇರಿಗಳು ಕಾರ್ಯಾರಂಭವಾಗಿಲ್ಲ ಮತ್ತು ತಾಲ್ಲೂಕು ಪಂಚಾಯತಿಗಳ ಪುನರ್ ನಿರ್ಮಾಣವಾಗಿಲ್ಲದಿರಲು ಕಾರಣಗಳೇನು; (ವಿವರ ನೀಡುವುದು)	2017-18ನೇ ಸಾಲಿನ ಆಯವ್ಯಯ ಘೋಷಣೆಯನ್ವಯ ರಾಜ್ಯದಲ್ಲಿ ಒಟ್ಟು 50 ತಾಲ್ಲೂಕುಗಳನ್ನು ರಚಿಸಿ, ಅಂತಿಮ ಅಧಿಸೂಚನೆಯನ್ನು ಹೊರಡಿಸಲಾಗಿದೆ. ಈ ನೂತನ ತಾಲ್ಲೂಕು ಕೇಂದ್ರಗಳಲ್ಲಿ ಕಂದಾಯ ಇಲಾಖೆ ವತಿಯಿಂದ ತಾಲ್ಲೂಕು ಕಛೇರಿಯನ್ನು ತೆರೆಯಲಾಗಿದೆ. ಜೊತೆಗೆ, ದಿನಾಂಕ: 17.01.2018 ರಲ್ಲಿ ಆದೇಶದಲ್ಲಿ, 50 ಗ್ರಾಮಗಳಗಿಂತ ಹೆಚ್ಚಿರುವ ತಾಲ್ಲೂಕುಗಳಿಗೆ ತಹಶೀಲ್ದಾರ್ ಹುದ್ದೆ ಸೇರಿದಂತೆ 17 ಹುದ್ದೆಗಳನ್ನು ಹಾಗೂ 50 ಗ್ರಾಮಗಳಗಿಂತ ಕಡಿಮೆ ಇರುವ ತಾಲ್ಲೂಕುಗಳಿಗೆ 12 ಹುದ್ದೆಗಳನ್ನು ಸೃಜಿಸಲಾಗಿದೆ. ಮುಂದುವರಿದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ದಿನಾಂಕ:14-10-2019ರಲ್ಲಿ ಹೊಸ ತಾಲ್ಲೂಕು ಪಂಚಾಯತಿಗಳನ್ನು ರಚಿಸಿ ಅಧಿಸೂಚಿಸಲಾಗಿದೆ. ಈ ತಾಲ್ಲೂಕು ಪಂಚಾಯತಿಗಳನ್ನು ಕಾರ್ಯಾಚರಣೆಗೊಳಿಸಲು ತುರ್ತು ಕ್ರಮ ಕೈಗೊಳ್ಳಲು ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸುತ್ತೋಲೆ ಮೂಲಕ ಸೂಚನೆಗಳನ್ನು ನೀಡಲಾಗಿದೆ. ಜೊತೆಗೆ, ಹೊಸದಾಗಿ ರಚನೆಯಾಗಿರುವ ತಾಲ್ಲೂಕು ಪಂಚಾಯತಿಗಳಿಗೆ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಸ್ವತಂತ್ರವಾಗಿ ಅಥವಾ ಪ್ರಭಾರದಲ್ಲಿ ಇಡಲಾಗಿದೆ. ಹೊಸ ತಾಲ್ಲೂಕು ಪಂಚಾಯತಿಗಳಿಗೆ ಮೀಸಲಾತಿ ನಿಗಧಿಪಡಿಸಲು ಕ್ರಮ ವಹಿಸಲಾಗಿದ್ದು, ಮೀಸಲಾತಿ ಅಧಿಸೂಚನೆಯಾದ ಕೂಡಲೇ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಚುನಾವಣೆ ನಡೆಸಲಾಗುವುದು.

.... 2

ಆ)	ಹೊಸ ತಾಲ್ಲೂಕಿಗೆ ಇರಬೇಕಾದ ಎಲ್ಲಾ ಇಲಾಖೆಗಳ ಕಚೇರಿಗಳನ್ನು ಅನುಷ್ಠಾನ ಮಾಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)	ಹೊಸ ತಾಲ್ಲೂಕುಗಳಲ್ಲಿ ಕಂದಾಯ ಇಲಾಖೆ ವತಿಯಿಂದ ಹೊಸ ತಾಲ್ಲೂಕು ಕಛೇರಿಯನ್ನು ತೆರೆಯಲು ಕ್ರಮವಹಿಸಲಾಗಿದೆ. ಇತರೆ ಇಲಾಖೆಗಳ ತಾಲ್ಲೂಕು ಮಟ್ಟದ ಕಛೇರಿಗಳನ್ನು ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಹಂತ ಹಂತವಾಗಿ ತೆರೆಯಲು ಸರ್ಕಾರದ ದಿನಾಂಕ: 06.09.2017 ರ ಆದೇಶದಲ್ಲಿ ಅನುಮತಿ ನೀಡಲಾಗಿದೆ. ಜೊತೆಗೆ, ನೂತನ ತಾಲ್ಲೂಕುಗಳಲ್ಲಿ ಪ್ರಮುಖ ಇಲಾಖೆಗಳ ತಾಲ್ಲೂಕು ಮಟ್ಟದ ಕಛೇರಿಗಳನ್ನು ಕಾರ್ಯಾರಂಭ ಮಾಡಲು ಸಂಬಂಧಪಟ್ಟ ಸಚಿವಾಲಯದ ಇಲಾಖೆಗಳ ಮುಖ್ಯಸ್ಥರೊಂದಿಗೆ ದಿನಾಂಕ: 04.07.2019 ರಂದು ಅಂದಿನ ಮಾನ್ಯ ಕಂದಾಯ ಸಚಿವರು ಸಭೆ ನಡೆಸಿ ಹೊಸ ತಾಲ್ಲೂಕುಗಳು ಪೂರ್ಣ ಪ್ರಮಾಣದಲ್ಲಿ ಕಛೇರಿ ಪ್ರಾರಂಭಿಸಲು ಅನುವಾಗುವಂತೆ ತುರ್ತು ಕ್ರಮ ವಹಿಸಲು ಹಾಗೂ ಹುದ್ದೆಗಳನ್ನು ಸೃಜಿಸಲು ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಲಾಗಿದೆ.
ಇ)	ಈ ಹೊಸ ತಾಲ್ಲೂಕಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿರುವುದಿಲ್ಲ; ಈ ಅವಶ್ಯಕ ಮೂಲ ಸೌಕರ್ಯಗಳನ್ನು ಯಾವಾಗ ಒದಗಿಸಲಾಗುವುದು; ಇದಕ್ಕೆ ಕಾಲಮಿತಿ ಏನು; (ವಿವರ ನೀಡುವುದು)	ಹೊಸದಾಗಿ ರಚಿಸಲಾಗಿರುವ 50 ತಾಲ್ಲೂಕುಗಳ ಕಾರ್ಯಾರಂಭ ಮಾಡಲು ಆಡಳಿತಾತ್ಮಕ ಪ್ರಕ್ರಿಯೆಯನ್ನು ಪ್ರಾರಂಭಿಸುವ ಸಲುವಾಗಿ 2017-18ನೇ ಸಾಲಿನಲ್ಲಿ ಪ್ರತಿ ತಾಲ್ಲೂಕಿಗೆ ತಲಾ ರೂ.10.00 ಲಕ್ಷಗಳಂತೆ ಒಟ್ಟು 500.00 ಲಕ್ಷಗಳ ಅನುದಾನವನ್ನು ಸಂಬಂಧಿಸಿದ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ. 2018-19 ನೇ ಸಾಲಿನಲ್ಲಿ ಹೊಸ ತಾಲ್ಲೂಕು ಕಚೇರಿಗಳಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಪ್ರತಿ ತಾಲ್ಲೂಕಿಗೆ ತಲಾ ರೂ.10.00 ಲಕ್ಷಗಳಂತೆ ಒಟ್ಟಾರೆ ರೂ.500.00 ಲಕ್ಷಗಳನ್ನು ಸಂಬಂಧಿಸಿದ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ. 2019-20 ನೇ ಸಾಲಿನಲ್ಲಿ ಹೊಸ ತಾಲ್ಲೂಕು ಕಚೇರಿಗಳಿಗೆ ಆಡಳಿತಾತ್ಮಕ ಇತರೆ ಖರ್ಚುಗಳನ್ನು ಭರಿಸಲು ಪ್ರತಿ ತಾಲ್ಲೂಕಿಗೆ ತಲಾ ರೂ.5.00 ಲಕ್ಷಗಳಂತೆ ಒಟ್ಟಾರೆ ರೂ.250.00 ಲಕ್ಷಗಳನ್ನು ಸಂಬಂಧಿಸಿದ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ. ಈ 50 ಹೊಸ ತಾಲ್ಲೂಕುಗಳ ಪೈಕಿ 13 ಹೊಸ ತಾಲ್ಲೂಕುಗಳಲ್ಲಿ ಮಿನಿ ವಿಧಾನ ಸೌಧ ನಿರ್ಮಾಣಕ್ಕಾಗಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಉಳಿದ ತಾಲ್ಲೂಕುಗಳಲ್ಲಿ ಸ್ಥಳ ಗುರುತಿಸುವ/ಸ್ಥಳ ಮಂಜೂರು ಮಾಡುವ ಪ್ರಕ್ರಿಯೆಗಳು ಜಾರಿಯಲ್ಲಿದೆ. ಮುಂದಿನ ದಿನಗಳಲ್ಲಿ ಆಯವ್ಯಯದಲ್ಲಿ ಒದಗಿಸುವ ಅನುದಾನ ಹಾಗೂ ಅಗತ್ಯತೆಯ ಆಧಾರದಲ್ಲಿ ಅನುದಾನ ಬಿಡುಗಡೆಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

....3

ಈ)	ಕೊಡಗು ಜಿಲ್ಲೆಗೆ ಹೊಸ ತಾಲ್ಲೂಕುಗಳ ಘೋಷಣೆಯಾಗಿದ್ದು, ಇವುಗಳು ಯಾವಾಗ ಕಾರ್ಯಾರಂಭ ಮಾಡುತ್ತವೆ; ಇವುಗಳ ಕಾರ್ಯಾರಂಭಕ್ಕೆ ಕಾಲಮಿತಿ ಏನು; ಈ ಹೊಸ ತಾಲ್ಲೂಕುಗಳಿಗೆ ಒದಗಿಸಿರುವ ಅನುದಾನ ಎಷ್ಟು? (ವಿವರ ನೀಡುವುದು)	2019-20ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಲಾದಂತೆ ಕೊಡಗು ಜಿಲ್ಲೆಯ ಪೊನ್ನಂಪೇಟೆ ಮತ್ತು ಕುಶಾಲನಗರ ಪಟ್ಟಣಗಳನ್ನು ಒಳಗೊಂಡಂತೆ 12 ಹೊಸ ತಾಲ್ಲೂಕುಗಳನ್ನು ರಚಿಸಲು ದಿನಾಂಕ:28-02-2019 ರ ಸರ್ಕಾರದ ಆದೇಶದಲ್ಲಿ ತಾತ್ವಿಕವಾಗಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಸದರಿ ಆದೇಶದಲ್ಲಿ ಕಂದಾಯ ಇಲಾಖೆ ವತಿಯಿಂದ ಹೊಸ ತಾಲ್ಲೂಕು ಕಚೇರಿಯನ್ನು ತೆರೆಯಲು ಮತ್ತು ಇತರೆ ಇಲಾಖೆಗಳು ತಾಲ್ಲೂಕು ಮಟ್ಟದ ಕಚೇರಿಗಳನ್ನು ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಹಂತ ಹಂತವಾಗಿ ತೆರೆಯಲು ಸಹ ಅನುಮತಿ ನೀಡಲಾಗಿದೆ. ಮುಂದುವರಿದು, ಈ ತಾಲ್ಲೂಕುಗಳ ವ್ಯಾಪ್ತಿಗೆ ಯಾವ ಯಾವ ಗ್ರಾಮಗಳನ್ನು ಸೇರಿಸಬೇಕು ಎಂಬ ಕುರಿತು ಹಿಂದಿನ ತಾಲ್ಲೂಕು ಪುನರ್ ರಚನೆ ಸಮಿತಿಯ ಶಿಫಾರಸ್ಸು ಹಾಗೂ ಇತ್ತೀಚಿನ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಂಬಂಧಪಟ್ಟ ಶಾಸಕರು ಮತ್ತು ಸ್ಥಳೀಯ ಜನಪ್ರತಿನಿಧಿಗಳೊಂದಿಗೆ ಸಮಾಲೋಚನೆ ಸಭೆ ನಡೆಸಿ ವರದಿ ಸಲ್ಲಿಸುವಂತೆ ಕೊಡಗು ಜಿಲ್ಲೆಯ ಜಿಲ್ಲಾಧಿಕಾರಿಯವರನ್ನು ಕೋರಲಾಗಿತ್ತು. ಜಿಲ್ಲಾಧಿಕಾರಿಗಳಿಂದ ಪೊನ್ನಂಪೇಟೆ ತಾಲ್ಲೂಕಿಗೆ ಸಂಬಂಧಿಸಿದಂತೆ ಪ್ರಸ್ತಾವನೆ ಸ್ವೀಕೃತವಾಗಿರುತ್ತದೆ. ಈ ವರದಿಯನ್ನಾಧರಿಸಿ ಪ್ರತ್ಯೇಕವಾಗಿ ಪ್ರಾಥಮಿಕ ಅಧಿಸೂಚನೆ ಹೊರಡಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ. ಅದೇ ರೀತಿ ಕುಶಾಲನಗರ ತಾಲ್ಲೂಕಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳಿಂದ ಪ್ರಸ್ತಾವನೆ ಸ್ವೀಕೃತವಾದ ನಂತರ ಪ್ರತ್ಯೇಕ ಅಧಿಸೂಚನೆ ಹೊರಡಿಸಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. ಈ ನೂತನ ತಾಲ್ಲೂಕುಗಳಿಗೆ ಅಂತಿಮ ಅಧಿಸೂಚನೆ ಹೊರಡಿಸಿದ ನಂತರ ಅಗತ್ಯತೆ ಹಾಗೂ ಆಯವ್ಯಯದಲ್ಲಿ ಒದಗಿಸುವ ಅನುದಾನವನ್ನು ಆಧರಿಸಿ ಅನುದಾನ ಬಿಡುಗಡೆಗೆ ಕ್ರಮ ವಹಿಸಲಾಗುವುದು.

ಸಂಖ್ಯೆ: ಆರ್‌ಡಿ 17ಎಸ್‌ಎಸ್‌ಸಿ 2020

(ಆರ್. ಅಶೋಕ)
ಕಂದಾಯ ಸಚಿವರು